# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 691
2. ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
3. ಉತ್ತರಿಸಬೇಕಾದ ದಿನಾಂಕ : 14.12.2020
4. ಉತ್ತರಿಸುವ ಸಚಿವರು : ಕಾರ್ಮಿಕ ಮತ್ತು ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯ ಮೈಷುಗರ್ ಸಕ್ಕರೆ ಕಾರ್ಖಾನೆಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಇದರಿಂದಾಗಿ ಕಬ್ಬು ಬೆಳೆಗಾರರಿಗೆ ಹಾಗೂ ನೌಕರರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ<br>ಮಂಡ್ಯದ ಮೈಸೂರು ಸಕ್ಕರೆ ಕಾರ್ಖಾನೆಯು 2015-16, 2016-17 ಮತ್ತು 2019-20ನೇ ಹಂಗಾಮಿನಲ್ಲಿ ಕಬ್ಬು ನುರಿಸುವಿಕೆಯನ್ನು ಸ್ಥಗಿತಗೊಳಿಸಿದ್ದ ಹಿನ್ನೆಲೆಯಲ್ಲಿ ರೈತರ ಹಿತಾಸಕ್ತಿಯನ್ನು ಕಾಪಾಡುವ ದೃಷ್ಟಿಯಿಂದ ಈ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದಲ್ಲಿ ಬೆಳೆದ ಕಬ್ಬನ್ನು ನೆರೆಯ ಸಕ್ಕರೆ ಕಾರ್ಖಾನೆಗಳಿಗೆ ಮತ್ತು ನೆರೆ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಸರಬರಾಜು ಮಾಡಲಾಗಿದೆ.<br>ಕಬ್ಬು ನುರಿಸುವಿಕೆ ಸ್ಥಗಿತಗೊಳಿಸಿದ್ದ ಹಿನ್ನೆಲೆಯಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು 285 ಖಾಯಂ ಕಾರ್ಮಿಕರ ಪೈಕಿ ಒಟ್ಟು 208 ಕಾರ್ಮಿಕರು ಸ್ವಯಂ ನಿವೃತ್ತಿಯನ್ನು ಪಡೆಯಲು ಅವರ ಇಚ್ಛೆಯನ್ನು ವ್ಯಕ್ತಪಡಿಸಿದ್ದರಿಂದ, ಕಾರ್ಮಿಕರ ಹಿತಾಸಕ್ತಿಯನ್ನು ಪರಿಗಣಿಸಿ, ಒಟ್ಟು 208 ಕಾರ್ಮಿಕರಿಗೆ ಸ್ವಯಂ ನಿವೃತ್ತಿ ಯೋಜನೆಯನ್ನು ಜಾರಿಗೊಳಿಸುವುದಕ್ಕಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020 ದಿನಾಂಕ: 15.06.2020ರಲ್ಲಿ ರೂ.21.80 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. |
| ಇ) | ಕಾರ್ಖಾನೆ ಮುಚ್ಚಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು) | ಮೈಸೂರು ಸಕ್ಕರೆ ಕಂಪನಿಯು 2005ರಲ್ಲಿ ಬಿ.ಐ.ಎಫ್.ಆರ್. ನಿಂದ ರೋಗಗ್ರಸ್ಥ ಕಾರ್ಖಾನೆಯೆಂದು ಘೋಷಿಸಲ್ಪಟ್ಟಿರುತ್ತದೆ. ಸದರಿ ಕಾರ್ಖಾನೆಯು 2013-14ರ ಅಂತ್ಯಕ್ಕೆ ರೂ.529.43 ಕೋಟಿಗಳಷ್ಟು ಕ್ರೋಢೀಕೃತ ನಷ್ಟವನ್ನು ಅನುಭವಿಸಿದ್ದ ಕಾರಣದಿಂದಾಗಿ, 2015-16, 2016-17 ಮತ್ತು 2019-20ನೇ ಹಂಗಾಮಿನಲ್ಲಿ ದುಡಿಯುವ ಬಂಡವಾಳದ ಕೊರತೆಯುಂಟಾಗಿ, ಕಬ್ಬು ನುರಿಸುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ. ಇದಲ್ಲದೆಯೇ, ದಿನಾಂಕ: 31.12.2019ರ ಅಂತ್ಯಕ್ಕೆ ಒಟ್ಟು ರೂ.103.35 ಕೋಟಿಗಳಷ್ಟು ಸಾಲ ಮತ್ತು ಜವಾಬ್ದಾರಿಗಳನ್ನು ಹೊಂದಿರುತ್ತದೆ. |
| ಈ) | ಕಾರ್ಖಾನೆಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಮೈಸೂರು ಸಕ್ಕರೆ ಕಾರ್ಖಾನೆಯು ರಾಜ್ಯ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟ ಸಾರ್ವಜನಿಕ ವಲಯದ ಕಾರ್ಖಾನೆಯಾಗಿರುತ್ತದೆ. ಈ ಕಾರಣದಿಂದಾಗಿ, ಸದರಿ ಕಾರ್ಖಾನೆಗೆ ದುಡಿಯುವ ಬಂಡವಾಳದ ರೂಪದಲ್ಲಿ ರಾಜ್ಯ ಸರ್ಕಾರದಿಂದ ಸಾಲ ಮತ್ತು ಅನುದಾನವಾಗಿ ಇದುವರೆವಿಗೂ ಒಟ್ಟು ರೂ.522.00 ಕೋಟಿಗಳಷ್ಟು ಆರ್ಥಿಕ ನೆರವನ್ನು ಒದಗಿಸಲಾಗಿದೆ.<br>ಆದಾಗ್ಯೂ, ಕಾರ್ಖಾನೆಯು ಆರ್ಥಿಕ ನಷ್ಟವನ್ನು ಅನುಭವಿಸುತ್ತಾ ಬಂದಿದ್ದು, ಮೈಸೂರು ಸಕ್ಕರೆ ಕಾರ್ಖಾನೆಯ ವ್ಯಾಪ್ತಿಯಲ್ಲಿ ಬೆಳೆದ ಅಂದಾಜು 8.21ಲಕ್ಷ ಮೆ.ಟನ್ ಕಬ್ಬನ್ನು ಪೂರ್ಣ ಪ್ರಮಾಣದಲ್ಲಿ ನುರಿಸಲು ಸಾಧ್ಯವಾಗುತ್ತಿಲ್ಲ. |

| | | |
|---|---|---|
| | | ಆದ್ದರಿಂದ, ಮೈಸೂರು ಸಕ್ಕರೆ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದ ವ್ಯಾಪ್ತಿಯಲ್ಲಿನ ಕಬ್ಬು ಬೆಳೆಗಾರ ರೈತರ, ಕಂಪನಿಯ ಷೇರುದಾರರ ಮತ್ತು ಕಾರ್ಖಾನೆಯ ಕಾರ್ಮಿಕರ ಹಿತಾಸಕ್ತಿಯನ್ನು ಕಾಪಾಡುವ ದೃಷ್ಟಿಯಿಂದ ಹಾಗೂ ಕಾರ್ಖಾನೆಯ ಸಾಲ ಮತ್ತು ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾಯಿಸುವುದು ಅಗತ್ಯವಿರುವುದರಿಂದ ಮೈಸೂರು ಸಕ್ಕರೆ ಕಂಪನಿ ನಿಯಮಿತ ಮಂಡ್ಯ – ಈ ಕಾರ್ಖಾನೆಯನ್ನು LROT (Lease Rehabilite Operate Transfer) ಆಧಾರದ ಮೇಲೆ "ಇದ್ದಲ್ಲಿ ಇದ್ದಂತೆಯೇ" (As is where is basis) 40 ವರ್ಷಗಳ ಅವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020 ದಿನಾಂಕ: 18.11.2020ರಲ್ಲಿ ಅನುಮತಿ ನೀಡಲಾಗಿದೆ.<br><br>ಈ ಸಂಬಂದ ಟೆಂಡರ್ ಕರೆಯಲು, ಟೆಂಡರ್ ಡಾಕ್ಯುಮೆಂಟ್ ಹಾಗೂ ಒಪ್ಪಂದ ಪತ್ರವನ್ನು ಸಿದ್ದಪಡಿಸುವುದಕ್ಕಾಗಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಅದ್ಯಕ್ಷತೆಯಲ್ಲಿ ತಾಂತ್ರಿಕ ಸಲಹಾ ಸಮಿತಿಯನ್ನು ರಚಿಸಲಾಗಿದ್ದು, ಟೆಂಡರ್ ಪ್ರಕ್ರಿಯೆಗಳನ್ನು ಕೈಗೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಉ) | ಯಾವ ಕಾಲಮಿತಿಯಲ್ಲಿ ಕಾರ್ಖಾನೆಯನ್ನು ಪ್ರಾರಂಭಿಸಲಾಗುವುದು? | ಟೆಂಡರ್ ಪ್ರಕ್ರಿಯೆಯಲ್ಲಿ ಯಶಸ್ವಿಯಾಗುವ ಗುತ್ತಿಗೆದಾರರು 2021-22ನೇ ಹಂಗಾಮಿನಿಂದ ಕಬ್ಬು ನುರಿಸುವ ಕಾರ್ಯವನ್ನು ಪ್ರಾರಂಭಿಸತಕ್ಕದೆಂದು, ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020 ದಿನಾಂಕ: 18.11.2020ರಲ್ಲಿ ಷರತ್ತು ವಿಧಿಸಿರುತ್ತದೆ. ಅದರಂತೆ ಯಶಸ್ವಿ ಗುತ್ತಿಗೆದಾರರು 2021-22ನೇ ಹಂಗಾಮಿನಿಂದ ಸದರಿ ಕಾರ್ಖಾನೆಯಲ್ಲಿ ಕಬ್ಬು ನುರಿಸುವ ಕಾರ್ಯವನ್ನು ಪ್ರಾರಂಭಿಸುತ್ತಾರೆ. |

ಸಂಖ್ಯೆ: ಸಿಐ 281 ಸಿಓಎಫ್ 2020

(ಅರಬೈಲ್ ಶಿವರಾಮ ಹೆಬ್ಬಾರ)
ಕಾರ್ಮಿಕ ಮತ್ತು ಸಕ್ಕರೆ ಸಚಿವರು